# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 805 |
| ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 12.12.2025. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಪ್ರಸ್ತುತ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಖಾಲಿಯಿರುವ, ಮಂಜೂರಾಗಿರುವ ಆರ್ಥಿಕ ಇಲಾಖೆಯಿಂದ ಅನುಮೋದನೆ ಪಡೆದಿರುವ ಹಾಗೂ ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ನೇಮಕಾತಿ ಹಂತದಲ್ಲಿರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತ್ ಕಾರ್ಯದರ್ಶಿ ಗ್ರೇಡ್-1 ಗ್ರಾಮ ಪಂಚಾಯತ್ ಕಾರ್ಯದರ್ಶಿ ಗ್ರೇಡ್-2 ಹಾಗೂ ದ್ವಿತಿಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳ ಸಂಖ್ಯೆ ಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು) | ಪ್ರಸ್ತುತ ರಾಜ್ಯದಲ್ಲಿ 5954 ಪಂಚಾಯತಿ ಅಭಿವೃದ್ಧಿ ಅಧಿಕಾರಿ, 2127 ಗ್ರಾಮ ಪಂಚಾಯತಿ ಕಾರ್ಯದರ್ಶಿ ಹಾಗೂ ಗ್ರಾಮೀಣಾಭಿವೃದ್ಧಿ ಸಹಾಯಕ (ಗ್ರೇಡ್–I), 3827 ಗ್ರಾಮಪಂಚಾಯತ್ ಕಾರ್ಯದರ್ಶಿ ಹಾಗೂ ಗ್ರಾಮೀಣಾಭಿವೃದ್ಧಿ ಸಹಾಯಕ (ಗ್ರೇಡ್ – II,) 2579 ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ವೃಂದದ ಹುದ್ದೆಗಳು ಆರ್ಥಿಕ ಇಲಾಖೆಯಿಂದ ಮಂಜೂರಾಗಿರುತ್ತವೆ.<br><br>ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ ಹುದ್ದೆಗಳ ಪೈಕಿ 150 ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, 135 ಗ್ರಾಮ ಪಂಚಾಯತ್ ಕಾರ್ಯದರ್ಶಿ ಹಾಗೂ ಗ್ರಾಮೀಣಾಭಿವೃದ್ಧಿ ಸಹಾಯಕ (ಗ್ರೇಡ್ – I) 343 ಗ್ರಾಮಪಂಚಾಯತ್ ಕಾರ್ಯದರ್ಶಿ ಹಾಗೂ ಗ್ರಾಮೀಣಾಭಿವೃದ್ಧಿ ಸಹಾಯಕ (ಗ್ರೇಡ್ – II) ಮತ್ತು 158 ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ವೃಂದದ ಹುದ್ದೆಗಳ ನೇರ ನೇಮಕಾತಿಗೆ ಆರ್ಥಿಕ ಇಲಾಖೆಯಿಂದ ಸಹಮತಿ ದೊರೆತಿರುತ್ತದೆ. |

| ಪದನಾಮ | ನೇರ ನೇಮಕಾತಿಗಾಗಿ ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಿರುವ ಹುದ್ದೆಗಳ ಸಂಖ್ಯೆ | | | |
|---|---|---|---|---|
| | ಉಳಿಕೆ ಮೂಲ ವೃಂದ | ಕಲ್ಯಾಣ ಕರ್ನಾಟಕ ವೃಂದ | ಒಟ್ಟು | ಷರಾ |
| ಪಂಚಾಯತಿ ಅಭಿವೃದ್ಧಿ ಅಧಿಕಾರಿ | **150** | **97** | **247** | ನೇಮಕಾತಿ ಪ್ರಗತಿಯಲ್ಲಿರುತ್ತದೆ. |
| ಗ್ರಾಮ ಪಂಚಾಯತಿ ಕಾರ್ಯದರ್ಶಿ (ಗ್ರೇಡ್-I) | **135** | **77** | **212** | ನೇರ ಮೀಸಲಾತಿ ಅನುಷ್ಠಾನದ ಸಲುವಾಗಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳ ನೇಮಕಾತಿಗಾಗಿ ಹೊಸದಾಗಿ ಅಧಿಸೂಚನೆ ಹೊರಡಿಸದಿರಲು ನೀಡಿದ ಆದೇಶದ ಹಿನ್ನೆಲೆಯಲ್ಲಿ ಈ ಹುದ್ದೆಗಳ ನೇಮಕಾತಿಗೆ ಅಧಿಸೂಚನೆ ಹೊರಡಿಸಿರುವುದಿಲ್ಲ. ನೇರ ಮೀಸಲಾತಿ ಅನುಷ್ಠಾನದ ಕುರಿತಾಗಿ ಪ್ರಸ್ತುತ ನ್ಯಾಯಾಲಯದಲ್ಲಿ ಪ್ರಕರಣ ಬಾಕಿ ಇದ್ದು, ಪ್ರಕರಣ ಇತ್ಯರ್ಥಗೊಂಡ |
| ಕಾರ್ಯದರ್ಶಿ (ಗ್ರೇಡ್-II) | **258** | **40** | **298** | |

| | | | | |
|---|---|---|---|---|
| ದ್ವಿ.ದ.ಲೆ. ಸಹಾಯಕ | 64 | 23 | 87 | ನಂತರ ಖಾಲಿ ಇರುವ ಕಾರ್ಯದರ್ಶಿ ಗ್ರೇಡ್-1 ಮತ್ತು 2, ದ್ವಿತೀಯ ದರ್ಜೆ ಲೆಕ್ಕ ಸಹಾಯಕ ಹುದ್ದೆಗಳ ನೇಮಕಾತಿ ಮಾಡಲು ಕ್ರಮ ವಹಿಸಲಾಗುವುದು. |
| ಒಟ್ಟು | 607 | 237 | 844 | |

| | | |
|---|---|---|
| (ಆ) | ರಾಜ್ಯದಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ. ಈ ಅಧಿಕಾರಿಗಳ ಕೊರತೆಯನ್ನು ನೀಗಿಸಲು ಹಾಗೂ ಗ್ರಾಮೀಣ ಪ್ರದೇಶಗಳ ಜನರ ಸೇವೆಗೆ ಅಡಚಣೆ ಉಂಟಾಗದಂತೆ ಸರ್ಕಾರ ಕೈಗೊಂಡ ಕ್ರಮವೇನು: | ಬಂದಿದೆ.<br><br>ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ ಹುದ್ದೆಗಳ ಪೈಕಿ ಉಳಿಕೆ ಮೂಲ ವೃಂದದ 150 ಮತ್ತು ಕಲ್ಯಾಣ ಕರ್ನಾಟಕ ವೃಂದದ 97 ಹುದ್ದೆಗಳು ಸೇರಿದಂತೆ ಒಟ್ಟು 247 ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ ಹುದ್ದೆಗಳ ನೇಮಕಾತಿಗೆ ಕರ್ನಾಟಕ ಲೋಕ ಸೇವಾ ಆಯೋಗದಿಂದ ದಿನಾಂಕ:15.03.2024 ರಂದು ಅಧಿಸೂಚನೆಯನ್ನು ಮತ್ತು 17.09.2024 ರಲ್ಲಿ ತಿದ್ದುಪಡಿ ಅಧಿಸೂಚನೆಗಳನ್ನು ಹೊರಡಿಸಿದ್ದು ದಿನಾಂಕ:16.11.2024 ಮತ್ತು 17.11.2024 ರಂದು ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳಿಗೆ ಮತ್ತು ಉಳಿಕೆ ಮೂಲ ವೃಂದದ ಹುದ್ದೆಗಳಿಗೆ ದಿನಾಂಕ: 07.12.2024 ಮತ್ತು 08.12.2024 ರಂದು ಸ್ಪರ್ಧಾತ್ಮಕ ಪರೀಕ್ಷೆ ನಡೆಸಲಾಗಿರುತ್ತದೆ,<br><br>ಮುಂದುವರೆದು ದಾಖಲೆಗಳ ಪರಿಶೀಲನೆಗಾಗಿ 1:3 ಅನುಪಾತದಲ್ಲಿ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಕಲ್ಯಾಣ ಕರ್ನಾಟಕ ವೃಂದಕ್ಕೆ ಸಂಬಂಧಿಸಿದಂತೆ ದಿನಾಂಕ: 08.07.2025 ರಂದು ಮತ್ತು ಉಳಿಕೆ ವೃಂದಕ್ಕೆ ಸಂಬಂಧಿಸಿದಂತೆ 20.08.2025 ರಂದು ಪ್ರಕಟಿಸಿದ್ದು, ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲು ಬಾಕಿ ಇರುತ್ತದೆ. ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.<br><br>ಮುಂಬಡ್ತಿ ಕೋಟಾದಡಿ ಖಾಲಿ ಇರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳಿಗೆ ಸಂಬಂಧಿಸಿದಂತೆ ದಿನಾಂಕ:01.01.2025 ರಲ್ಲಿದ್ದಂತೆ ಗ್ರೇಡ್-1 ಕಾರ್ಯದರ್ಶಿಗಳ ರಾಜ್ಯ ಮಟ್ಟದ ಕರಡು ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದ್ದು ಸ್ವೀಕೃತಗೊಂಡಿರುವ ಆಕ್ಷೇಪಣೆಗಳನ್ನು ಪರಿಶೀಲಿಸಲಾಗಿರುತ್ತದೆ. ರಾಜ್ಯ ಮಟ್ಟದ ಅಂತಿಮ ಜೇಷ್ಠತಾ ಪಟ್ಟಿ ಪ್ರಕಟಿಸಲು ಪರಿಶೀಲನೆಯಲ್ಲಿದ್ದು, ಮುಂಬಡ್ತಿ ಕೋಟಾದಡಿಯಲ್ಲಿ ಖಾಲಿ ಇರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳನ್ನು ಅನಂತರದಲ್ಲಿ ಭರ್ತಿ ಮಾಡಬೇಕಿರುತ್ತದೆ.<br><br>ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ 384 ಗ್ರಾಪಂಕಾ 2018(ಭಾಗ-1), ದಿನಾಂಕ:23.11.2018 ರಲ್ಲಿ ಗ್ರಾಮ ಪಂಚಾಯತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆ ನಿವೃತ್ತಿ, ಅಮಾನತ್ತು ಹಾಗೂ ಇನ್ನಿತರ ಕಾರಣಗಳಿಗೆ ತೆರವಾದಲ್ಲಿ ಸದರಿ ಗ್ರಾಮ ಪಂಚಾಯತಿಯಲ್ಲಿ ಗ್ರೇಡ್-1 ಕಾರ್ಯದರ್ಶಿ ಪೂರ್ಣ ಕಾಲಿಕವಾಗಿ ಕಾರ್ಯನಿರ್ವಹಿಸುತ್ತಿದ್ದಲ್ಲಿ ಅವರಿಗೆ ಪ್ರಭಾರ ವಹಿಸಲು ಹಾಗೂ ಪೂರ್ಣಕಾಲಿಕ ಗ್ರೇಡ್-1 ಕಾರ್ಯದರ್ಶಿ ಇಲ್ಲದಿದ್ದಲ್ಲಿ ನೆರೆಯ ಗ್ರಾಮ ಪಂಚಾಯತಿಯ ಅಭಿವೃದ್ಧಿ ಅಧಿಕಾರಿಗೆ ಹೆಚ್ಚುವರಿ ಪ್ರಭಾರ ವಹಿಸಲು ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದ್ದು, ಜನಸಾಮಾನ್ಯರಿಗೆ ಸರ್ಕಾರದ ಯೋಜನೆಗಳನ್ನು ಸಮಯಕ್ಕೆ ಸರಿಯಾಗಿ ತಲುಪಿಸಲು ಮತ್ತು ಆಡಳಿತವನ್ನು ಸುಗಮವಾಗಿ ನಡೆಸಲು ಅಗತ್ಯ ಕ್ರಮ ವಹಿಸಲಾಗಿರುತ್ತದೆ. |

| | | |
|---|---|---|
| (ಇ) | ಕರ್ನಾಟಕ ಲೋಕಸೇವಾ ಆಯೋಗವು ಇಲಾಖೆಯಲ್ಲಿನ ವಿವಿಧ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ವರ್ಷಾನುಗಟ್ಟಲೆ ಫಲಿತಾಂಶ ವಿಳಂಬ, ಪ್ರಶ್ನೆ ಪತ್ರಿಕೆ ಲೋಪ ದೋಷ ಸೇರಿ, ನಾನಾ ಕಾರಣಗಳಿಂದಾಗಿ ವಿಳಂಬ ಮಾಡುತ್ತಿರುವುದರಿಂದ ರಾಜ್ಯದ ಲಕ್ಷಾಂತರ ಅಭ್ಯರ್ಥಿಗಳ ಹಿತದೃಷ್ಟಿಯಿಂದಾಗಿ ಇನ್ನು ಮುಂದೆ ಎಲ್ಲಾ ಹುದ್ದೆಗಳನ್ನು ಭರ್ತಿ ಮಾಡಲು ಜವಾಬ್ದಾರಿಯನ್ನು ಕರ್ನಾಟಕ ಲೋಕಸೇವಾ ಆಯೋಗದ ಬದಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ನೀಡಲಾಗುವುದೇ; ಈ ಕುರಿತು ಸರ್ಕಾರದಿಂದ ಸ್ಪಷ್ಟನೆಯನ್ನು ನೀಡುವುದು? | ಆಡಳಿತದ ಹಿತದೃಷ್ಟಿಯಿಂದ ಸಂದರ್ಭಾನುಸಾರ ಸರ್ಕಾರವು ಸೂಕ್ತ ನಿರ್ಧಾರ ತೆಗೆದುಕೊಳ್ಳುತ್ತದೆ. |

ಸಂಖ್ಯೆ: ಗ್ರಾಅಪ 951 ಗ್ರಾಪಂಅ 2025

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.